Bangalore
Regional News
04.10.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಬೆಳಗಾವಿಯಲ್ಲಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯಾದ್ಯಂತ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ಪ್ರಗತಿಯಲ್ಲಿ ; ಜಿಬಿಎ ವ್ಯಾಪ್ತಿಯಲ್ಲಿ ಇಂದಿನಿಂದ ಸಮೀಕ್ಷೆ ಆರಂಭ

೩. ವಾರ್ಷಿಕ ಲೆಕ್ಕ ಪರಿಶೋಧನಾ ಮಾಹಿತಿ ಒದಗಿಸದ ನೊಂದಾಯಿತ ರಾಜಕೀಯ ಪಕ್ಷಗಳಿಗೆ ಶೋಕಾಸ್ ನೋಟಿಸ್

೪. ಯಾದಗಿರಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ೪೦ ಅಂಗನವಾಡಿ ಕಟ್ಟಡ ನಿರ್ಮಾಣ - ಸಚಿವ ಶರಣ ಬಸಪ್ಪ ದರ್ಶನಾಪುರ್

><><><><><><

ಬಡವರು, ದುರ್ಬಲ ವರ್ಗದವರು ಶೈಕ್ಷಣಿಕ, ಆರ್ಥಿಕ, ಸಾಮಾಜಿಕವಾಗಿ ಸಬಲಗೊಂಡು ಮುಖ್ಯವಾಹಿನಿಗೆ ಬಂದಾಗ ಅಸಮಾನತೆ ತೊಡೆದುಹಾಕಲು ಸಾಧ್ಯವಿದೆ. ಬಡವರ್ಗದಲ್ಲಿ ಶಕ್ತಿ ತುಂಬುವ ಸಲುವಾಗಿ ಸರ್ಕಾರ ಗ್ಯಾರಂಟಿಯಂಥ ಜನಪರ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಬಡವರಿಗೆ ಅತ್ಯುತ್ತಮವಾದ ಆರೋಗ್ಯ ಸೇವೆ ಒದಗಿಸುವುದು ಸರ್ಕಾರದ ಜವಾಬ್ದಾರಿ ಹಾಗೂ ಆದ್ಯ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು, ಇಂದು ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನೂತನ ಕಟ್ಟಡ ಹಾಗೂ ಗೃಹ ವೈದ್ಯರ ವಸತಿ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಿಲಾನ್ಯಾಸ ಹಾಗೂ ಪ್ರಧಾನ ಮಂತ್ರಿ ಉಷಾ ಯೋಜನೆಯಡಿ ನಿರ್ಮಿತವಾಗುತ್ತಿರುವ ವಿವಿಧ ಕಟ್ಟಡಗಳ ಶಂಕುಸ್ಥಾಪನೆ ಬೆಳಗಾವಿಯಲ್ಲಿ ನೆರವೇರಿಸಿ ಮಾತನಾಡಿದರು.

ಧ್ವನಿ : ಮುಖ್ಯಮಂತ್ರಿ (೩೦ ಸೆಕೆಂಡ್‌ಗಳು)

ಬಡವರ ಮಕ್ಕಳು ವೈದ್ಯರಾಗಬೇಕೆಂಬ ಉದ್ದೇಶದಿಂದ ೨೨ ಜಿಲ್ಲೆಗಳಲ್ಲಿ ನೂತನ ಸರ್ಕಾರಿ ಆಸ್ಪತ್ರೆಗಳನ್ನು ಆರಂಭಿಸಲಾಗಿದೆ. ಬೆಳಗಾವಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಹಂತಹಂತವಾಗಿ ವೈದ್ಯರ ಅವಶ್ಯಕತೆ ಪೂರೈಸಲಾಗುವುದು.  ಬೆಳಗಾವಿಗೆ ಒಂದು ನೂರು ಎಲೆಕ್ಟ್ರಿಕ್ ಬಸ್‌ಗಳ ಸೌಕರ್ಯ ಒದಗಿಸಲಾಗುವುದು. ಶಕ್ತಿ ಯೋಜನೆಯಿಂದ ಇದುವರೆಗೆ ೫೫೪ ಕೋಟಿ ಮಹಿಳೆಯರು ಉಚಿತ ಪ್ರಯಾಣದ ಲಾಭ ಪಡೆದುಕೊಂಡಿದ್ದಾರೆ ಎಂದು ಅವರು ತಿಳಿಸಿದರು.  ರಾಜ್ಯದಲ್ಲಿ ಅತೀವೃಷ್ಟಿಯಿಂದ ಹಾನಿಗೊಳಗಾದ ೯ ಜಿಲ್ಲೆಗಳಲ್ಲಿ ಸಂಚರಿಸಿ ಪರಿಶೀಲನೆ ನಡೆಸಿದ್ದು, ಬೆಳಹಾನಿ ಸಮೀಕ್ಷೆ ಕಾರ್ಯ ಶೇಕಡಾ ೩೦ ರಿಂದ ೫೦ ರಷ್ಟು ಆಗಿದೆ. ಅದು ಪೂರ್ಣಗೊಂಡ ತಕ್ಷಣ ಪರಿಹರ ಕಾರ್ಯ ಆರಂಭಿಸಲಾಗುವುದು. ಖುಷ್ಕಿ ಜಮೀನಿನ ಬೆಳೆಹಾನಿಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರದ ಪ್ರಕೃತಿ ವಿಕೋಪ ಪರಿಹಾರ ನಿಧಿ ಒಳಗೊಂಡು ತಲಾ ಎಂಟೂವರೆ ಸಾವಿರದಂತೆ ಪ್ರತಿ ಹೆಕ್ಟರ್‌ಗೆ ೧೭ ಸಾವಿರ ರೂಪಾಯಿಗಳು, ನೀರಾವರಿ ಜಮೀನಿನ ಬೆಳೆಹಾನಿಗೆ ೨೧ ಸಾವಿರ ಹಾಗೂ ಬಹುಬೆಳೆಗೆ ೩೧ ಸಾವಿರ ರೂಪಾಯಿಗಳ ಪರಿಹಾರ ನೀಡಲಾಗುವುದು. ಈ ಹಿಂದೆ ಇಷ್ಟೊಂದು ಪ್ರಮಾಣದಲ್ಲಿ ಪರಿಹಾರ ನೀಡಲಾಗಿಲ್ಲ ಎಂದು ಮುಖ್ಯಮಂತ್ರಿ ತಿಳಿಸಿದರು.  ಸಚಿವ ಶರಣ ಪ್ರಕಾಶ ಪಾಟೀಲ್ ಮಾತನಾಡಿ, ಖಾಸಗಿ ಆಸ್ಪತ್ರೆಗಳ ಚಿಕಿತ್ಸೆಯ ದುಬಾರಿ ವೆಚ್ಚವನ್ನು ತಗ್ಗಿಸುವ ಹಿನ್ನಲೆಯಲ್ಲಿ ಸರ್ಕಾರ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಆರಂಭಿಸಲಾಗಿದೆ. ಈ ಆಸ್ಪತ್ರೆಯಿಂದ ಉಚಿತ ಚಿಕಿತ್ಸೆ ದೊರೆಯುವುದರ ಮೂಲಕ ಬಡವರಿಗೆ ಮತ್ತು ಸಾಮಾನ್ಯರಿಗೆ ಕಾಮಧೇನು ಆಗಲಿದೆ. ಆಸ್ಪತ್ರೆ ಸಂಪೂರ್ಣವಾಗಿ ಸರ್ಕಾರದ ಸುಪರ್ದಿಯಲ್ಲಿ ಮುನ್ನಡೆಯುತ್ತಿದೆ ಎಂದು ತಿಳಿಸಿದರು.  ಸಾರಿಗೆ ಸಚಿವ ರಾಮಲಿಂಗರೆಡ್ಡಿ ಮಾತನಾಡಿ, ಬೆಳಗಾವಿಯಲ್ಲಿ ೧೮ ಕೋಟಿ ರೂಪಾಯಿಗಳ ವೆಚ್ಚದಲ್ಲಿ ನೂತನ ಬಸ್ ನಿಲ್ದಾಣ ನಿರ್ಮಿಸಲು ಉದ್ದೇಶಿಸಲಾಗಿದೆ. ಸದ್ಯದಲ್ಲಿಯೇ ರಾಜ್ಯದಲ್ಲಿ ೨ ಸಾವಿರ ನೂತನ ಬಸ್‌ಗಳನ್ನು ನೀಡಲಾಗುತ್ತಿದ್ದು, ವಾಯುವ್ಯ ಸಾರಿಗೆ ವಿಭಾಗಕ್ಕೆ ಏಳನೂರು ಬಸ್ಸಗಳು ದೊರೆಯಲಿವೆ. ಶಕ್ತಿ ಯೋಜನೆಯಿಂದ ಹೆಚ್ಚು ಉದ್ಯೋಗ ಸೃಷ್ಟಿಯಾಗಿದೆ ಎಂದು ತಿಳಿಸಿದರು.

><><><><><

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಆರಂಭವಾಗಿದ್ದು, ೧೭ ಸಾವಿರ ಸಮೀಕ್ಷಾದಾರರನ್ನು ನೇಮಕ ಮಾಡಲಾಗಿದೆ ಎಂದು  ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಬೆಂಗಳೂರಿನ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರಂತೆ ಕೆ.ಎ.ಎಸ್ ಹಿರಿಯ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳೆಂದು ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ಒಟ್ಟು ೩೪ ಕೆ.ಎ.ಎಸ್ ಅಧಿಕಾರಿಗಳಿಗೆ ಸಮೀಕ್ಷಾ ಕಾರ್ಯವನ್ನು ಸುಗಮವಾಗಿ ನಿರ್ವಹಿಸಲು ಸೂಕ್ತ ಜವಾಬ್ದಾರಿ ನೀಡಲಾಗಿದೆ ಎಂದು ತಿಳಿಸಿದ್ದರು. ಇನ್ನು ಜಿಬಿಎ

ವ್ಯಾಪ್ತಿಯಲ್ಲಿ ಇಂದಿನಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯ ಆರಂಭವಾಗಿದ್ದು, ನಗರದ ಎಲ್ಲಾ ನಾಗರಿಕರು ಆಧಾರ್ ಕಾರ್ಡ್/ರೇಷನ್ ಕಾರ್ಡ್ ಸೇರಿದಂತೆ ಇತರ ದಾಖಲೆಗಳೊಂದಿಗೆ ಸಮೀಕ್ಷಾದಾರರಿಗೆ ಸಹಕರಿಸುವಂತೆ ಮುಖ್ಯ ಆಯುಕ್ತರು ತಿಳಿಸಿದ್ದಾರೆ.

><><><><><

ಬೆಂಗಳೂರು ನಗರ ಜಿಲ್ಲೆಯಲ್ಲಿ ನೋಂದಣಿಯಾಗಿರುವ ರಾಜಕೀಯ ಪಕ್ಷಗಳು ಮೂರು ವರ್ಷಗಳಿಂದ ತನ್ನ ವಾರ್ಷಿಕ ಲೆಕ್ಕಪರಿಶೋಧಕ ಖಾತೆಗಳ ಮಾಹಿತಿಯನ್ನು ಆಯೋಗದ ಅನುಸಾರ ನಿಗದಿತ ಅವಧಿಯೊಳಗೆ ಸಲ್ಲಿಸದ ಕಾರಣ ಚುನಾವಣಾ ಆಯೋಗವು ಶೋಕಾಸ್ ನೋಟಿಸ್ ಜಾರಿಗೊಳಿಸಿದೆ ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ.ಜಿ ತಿಳಿಸಿದ್ದಾರೆ. ನೋಂದಾಯಿತ ಮಾನ್ಯತೆಯನ್ನು ಪಡೆಯದ ರಾಜಕೀಯ ಪಕ್ಷಗಳಿಗೆ ಚುನಾವಣಾ ಆಯೋಗವು ಸಂವಿಧಾನದ ೩೨೪ನೇ ವಿಧಿಯಡಿ ಜನ ಪ್ರಾತಿನಿಧ್ಯ ಕಾಯ್ದೆ ೧೯೫೧ ಸೆಕ್ಷನ್ ೨೯ಎ ನಿಬಂಧನೆಗಳ ಅಡಿಯಲ್ಲಿ ಪಕ್ಷಗಳ ನೋಂದಣಿಯನ್ನು ಏಕೆ ರದ್ದು ಮಾಡಬಾರದು ಎಂದು ಕಾರಣ ಕೇಳಿ ಶೋಕಾಸ್ ನೋಟಿಸ್ ಜಾರಿಮಾಡಿದೆ ಎಂದು ತಿಳಿಸಿದ್ದಾರೆ.

><><><><><

ಯಾದಗಿರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ೪೦ ನೂತನ ಅಂಗನವಾಡಿ ಕಟ್ಟಡಗಳ ನಿರ್ಮಾಣ ಮಾಡಲಾಗುವುದು ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಮದ್ರಿಕಿ ಗ್ರಾಮದಲ್ಲಿ ನೂತನ ಅಂಗನವಾಡಿ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೩೮೦ ಅಂಗನವಾಡಿಗಳು ಬಾಡಿಗೆ ಕಟ್ಟಡಗಳಲ್ಲಿವೆ. ೬೦ಕ್ಕೂ ಹೆಚ್ಚು ಅಂಗನವಾಡಿಗಳಿಗೆ ನಿವೇಶನ ಲಭ್ಯವಿದ್ದು, ಪ್ರಸಕ್ತ ವರ್ಷ ೪೦ ಅಂಗನವಾಡಿ ಕಟ್ಟಡ ನಿರ್ಮಿಸಲಾಗುವುದು. ಪ್ರತಿ ಕಟ್ಟಡಕ್ಕೆ ೧೦ ಲಕ್ಷ ರೂಪಾಯಿದಂತೆ ೪ ಕೋಟಿ ರೂಪಾಯಿ ಅನುದಾನ ಒದಗಿಸಲಾಗುವುದು ಎಂದರು.

><><><><><

ಸತ್ಯ, ಧರ್ಮ, ಅಹಿಂಸೆಯಿಂದ ಸಾಧನೆ ಸಾಧ್ಯ ಎಂಬುದನ್ನು ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರು ಸಾಬೀತುಪಡಿಸಿದ್ದಾರೆ. ಗಾಂಧಿ ಎಂದೂ ಬತ್ತದ ಸತ್ಯದ ಗಣಿ ಎಂದು ಮಾಜಿ ಮುಖ್ಯಮಂತ್ರಿ ಡಾ.ಎಂ. ವೀರಪ್ಪ ಮೊಯಿಲಿ ಹೇಳಿದರು. ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಪ್ರಕಟಿಸಿರುವ ಡಾ.ಉದಯ ಕುಮಾರ್ ಇರ್ವತ್ತೂರು ಬರೆದಿರುವ 'ಲೋಕಗೆಂದಿನ ಗಾಂಧಿಯೆರ್' ಕೃತಿಯನ್ನು ಮಂಗಳೂರಿನಲ್ಲಿಂದು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಸತ್ಯ, ಅಹಿಂಸೆಯ

ಶಕ್ತಿಯಿಂದ ದೇಶದ ಎಲ್ಲರಿಗೂ ಸ್ವಾತಂತ್ರ್ಯ ತಂದುಕೊಟ್ಟಿರುವುದು ಗಾಂಧೀಜಿ ಎಂಬ ಧೀಮಂತ ವ್ಯಕ್ತಿತ್ವ. ಅಸ್ಪೃಶ್ಯತೆ ನಿವಾರಣೆಗೆ ಅವರಿಗೆ ಮಂಗಳೂರಿನ ಕುದ್ಮುಲ್ ರಂಗರಾವ್ ಗುರುಗಳಾಗಿದ್ದರು. ಗಾಂಧೀಜಿ ಅವರ ಬಗ್ಗೆ ತುಳುವಿನಲ್ಲಿ ಅಪೂರ್ವ ಪುಸ್ತಕ ಹೊರತರಲಾಗಿದೆ ಎಂದರು. ತುಳು ಭಾಷೆ ಸಂವಿಧಾನದ ಲನೇ ಪರಿಚ್ಛೇದಕ್ಕೆ ಸೇರ್ಪಡೆಯಾಗಬೇಕು ಎಂಬ ಕನಸು ಎಲ್ಲರಿಗೂ ಇದೆ. ಎಸ್.ಎಂ.ಕೃಷ್ಣ ಅವರು, ಮುಖ್ಯಮಂತ್ರಿಯಾಗಿದ್ದಾಗ ಈ ಬಗ್ಗೆ ಕೇಂದ್ರ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದೇ ಮೊದಲ ಹಾಗೂ ಕೊನೆಯ ಪ್ರಸ್ತಾವನೆ. ಆದಷ್ಟು ಶೀಘ್ರ ತುಳು ಭಾಷೆ ಎಂಟನೆಯ ಪರಿಚ್ಛೇದಕ್ಕೆ ಸೇರ್ಪಡೆಯಾಗಬೇಕು ಎಂದು ಮೊಯಿಲಿ ಆಶಿಸಿದರು.

><><><><><

ದಾವಣಗೆರೆ ಜಿಲ್ಲೆಯಲ್ಲಿ ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ಕಾರ್ಯವನ್ನು ಶೇಕಡ ೭೫ ರಷ್ಟು ಪೂರ್ಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ ಅವರು, ೪ ಸಾವಿರದ ೪೬೨ ಜನ ಗಣತಿಕಾರ್ಯದಲ್ಲಿ ಭಾಗವಹಿಸಿದ್ದು, ಇಲ್ಲಿಯವರೆಗೂ ಶೇಕಡ ೭೫ ರಷ್ಟು ಪ್ರಗತಿಯೊಂದಿಗೆ ರಾಜ್ಯದಲ್ಲಿಯೇ ೪ ಅಥವಾ ೫ನೇ ಸ್ಥಾನದಲ್ಲಿ ಜಿಲ್ಲೆ ಇದೆ ಎಂದು ಹೇಳಿದರು.

ಧ್ವನಿ : ಡಾ.ಜಿ.ಎಂ.ಗಂಗಾಧರ ಸ್ವಾಮಿ ಜಿಲ್ಲಾಧಿಕಾರಿ (೨೯ ಸೆಕೆಂಡ್‌ಗಳು)

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ೬ನೇ ವಾರ್ಡ್‌ನಲ್ಲಿ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಂಡಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯನ್ನು ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಡಾ.ಕೆ.ಎನ್ ಅನುರಾಧ ಅವರು, ಮನೆಮನೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಸಮೀಕ್ಷೆಯ ವೇಳೆ ಸಮೀಕ್ಷೆದಾರರು ಕೇಳುವ ಪ್ರಶ್ನೆಗಳಿಗೆ ಸ್ಪಷ್ಟವಾಗಿ ಉತ್ತರಿಸಿ, ಯಾವುದೇ ಕಾರಣಕ್ಕೂ ಮಾಹಿತಿಯನ್ನು ನೀಡಲು ಹಿಂಜರಿಯಬೇಡಿ. ತುಮಕೂರು ಜಿಲ್ಲೆಯಲ್ಲಿ ನಡೆಯುತ್ತಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಶೇಕಡ ೭೦ರಷ್ಟು ಪೂರ್ಣಗೊಂಡಿದ್ದು, ಸಮೀಕ್ಷೆ ಪ್ರಗತಿಯನ್ನು ಸಾಧಿಸಿದ ಅಧಿಕಾರಿ/ಸಿಬ್ಬಂದಿಯ ಕಾರ್ಯವಿಧಾನದ ಬಗ್ಗೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯ ಜಿ.ಎನ್. ಶ್ರೀಕಂಠಯ್ಯ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ಇಂದು ನಡೆದ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಮೀಕ್ಷೆಯ ಅಂಕಿ ಅಂಶಗಳನ್ನು ಅವಲೋಕಿಸಿ ಮಾತನಾಡಿದರು.

><><><><><

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಇವರೆಗೆ ೧ ಲಕ್ಷದ ೧೦ ಸಾವಿರದ ೧೩೫ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ.

><><><><><

’ಸ್ವಚ್ಛ ಭಾರತ, ಸ್ವಸ್ಥ ಭಾರತ’ ಧ್ಯೇಯದೊಂದಿಗೆ, ಅಕ್ಟೋಬರ್ ೧ ರಿಂದ ಇದೇ ೩೧ರವರೆಗೆ, ನಾಡಿನಾದ್ಯಂತ, ಸ್ವಚ್ಛತೆ ಹಾಗೂ ದೈಹಿಕ ಸ್ವಾಸ್ಥ್ಯದ ಬಗ್ಗೆ ಕಾಳಜಿ ಮೂಡಿಸುವ ದೃಷ್ಟಿಯಿಂದ ಹೊಸಪೇಟೆ ನಗರದ ವಿಜಯನಗರ ಕಾಲೇಜಿನ ಎನ್‌ಎಸ್‌ಎಸ್ ಘಟಕದಿಂದ ಗಾಂಧಿಜಯಂತಿ ದಿನದಂದು ಕಾಲೇಜಿನ ಆವರಣದ ಸ್ವಚ್ಛತೆಯೊಂದಿಗೆ ವಿದ್ಯಾರ್ಥಿಗಳಲ್ಲಿ ಆರೋಗ್ಯ ಕಾಳಜಿ ಮೂಡಿಸಲಾಯಿತು.

><><><END><><><